(7)

ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ವ್ಹಿ. ಸಂಕನೂರ ಇವರು ನಿಯಮ 330-ಎ ಅಡಿಯಲ್ಲಿ ನೀಡಿರುವ ವಿಶೇಷ ಪ್ರಸ್ತಾವನೆಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಉತ್ತರ

ವಿಷಯ:

"2014-15ನೇ ಸಾಲಿನಲ್ಲಿ ಕಾರವಾರ ಹಾಗೂ ಶಿರಸಿ ಶೈಕ್ಷಣಿಕ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಹಾಗೂ ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರಿಗೆ ಅಕ್ಷರದಾಸೋಹ ಯೋಜನೆಯಡಿ ಅಡುಗೆ ಸಿಬ್ಬಂದಿಗೆ ಏಪ್ರಾನ್ ಖರೀದಿಗಾಗಿ ಪ್ರತಿ ಏಪ್ರಾನ್ ಗೆ ರೂ 1000 ದಂತೆ ಬಿಡುಗಡೆ ಮಾಡಲಾಗಿತ್ತು.

ಈ ಏಪ್ರಾನ್ ಖರೀದಿಯಲ್ಲಿ ಅವ್ಯವಹಾರ ಆಗಿದೆಯೆಂದು ಜಿಲ್ಲಾ ಪಂಚಾಯಿತಿ ಉತ್ತರ ಕನ್ನಡ ಜಿಲ್ಲೆಯ ಸಾಮಾನ್ಯ ಸಭೆಯಲ್ಲಿ ಚರ್ಚೆ ಹಾಗೂ ತನಿಖೆ ನಡೆಸಿ ಶಿಕ್ಷಕರು/ಮುಖ್ಯೋಪಾಧ್ಯಾಯರಿಂದ ಹೆಚ್ಚುವರಿಯಾಗಿ ನೀಡಿದ ಹಣವನ್ನು ಮರು ಭರಣ ಮಾಡಬೇಕೆಂದು ನಿರ್ಣಯಿಸಿರುವರು. ಈ ಹಿನ್ನೆಲೆಯಲ್ಲಿ ಜಂಟಿ ನಿರ್ದೇಶಕರು ಮಧ್ಯಾಹ್ನದ ಉಪಹಾರ ಯೋಜನೆ ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ಮತ್ತು ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಧಾರವಾಡ ಇವರು 15-12-2019 ರಂದು ಹೆಚ್ಚುವರಿಯಾಗಿ ನೀಡಿದ ಹಣವನ್ನು ಮರುಪಾವತಿ ಮಾಡಲು ನಿರ್ದೇಶನ ನೀಡಿರುವರು. ಅದರಂತೆ, ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಶಾಲೆಗಳ ಮುಖ್ಯೋಪಾಧ್ಯಾಯರಿಗೆ ನೋಟೀಸ್ ನೀಡಿ ಪ್ರತಿ ಏಪ್ರಾನ್‌ನ ಬೆಲೆ ರೂ. 315 ಇದ್ದು, ಅದಕ್ಕಿಂತ ಹೆಚ್ಚಿನ ಬೆಲೆಗೆ ಖರೀದಿಸಿದ್ದೀರಿ ಎಂದು ಆಪಾದಿಸಿ . ಹೀಗೆ ಹೆಚ್ಚುವರಿಯಾಗಿ ನೀಡಿದ ಹಣವನ್ನು ದಿನಾಂಕ:15/02/2020ರೊಳಗೆ ಮರುಪಾವತಿಸಬೇಕು ಇಲ್ಲದಿದ್ದರೆ ಫೆಬ್ರವರಿ ತಿಂಗಳ ವೇತನದಲ್ಲಿ ಕಟಾವು ಮಾಡಲಾಗುವುದು ಎಂದು ಎಚ್ಚರಿಕೆ ನೋಟೀಸ್ ನೀಡಿರುವರು.

ಈ ವಿಚಾರಕ್ಕೆ ಸಂಬಂಧಿಸಿದಂತೆ, ಏಪ್ರಾನ್ ಖರೀದಿಯಲ್ಲಿ ನಡೆದಂತಹ ನಿಜ ಸಂಗತಿ ಏನೆಂದರೆ, ಆಯಾ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಸಂಬಂಧಪಟ್ಟ ಸಿಆರ್‌ಪಿ / ಬಿಆರ್‌ಪಿ ಗಳು ಏಪ್ರಾನ್ ಪೂರೈಸುವ ಏಜೆನ್ಸಿಗಳನ್ನು ನೇರವಾಗಿ ಶಾಲೆಗೆ ಕರೆತಂದು ಏಪ್ರಾನ್ ವಿತರಿಸಿ ಸಂಬಂಧಪಟ್ಟವರಿಗೆ ಚೆಕ್ ಮೂಲಕ ಹಣವನ್ನು ನೀಡುವಂತೆ ಒತ್ತಾಯಿಸಿದ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಮುಖ್ಯೋಪಾಧ್ಯಾಯರು/ಶಿಕ್ಷಕರು ಚೆಕ್ ನೀಡಿದ್ದುಂಟು, ಹೀಗಾಗಿ ಮುಖ್ಯೋಪಾಧ್ಯಾಯರು/ ಶಿಕ್ಷಕರು ಈ ಖರೀದಿಯ ವ್ಯವಹಾರದಲ್ಲಿ ಯಾವುದೇ ಪಾತ್ರ ಇರುವುದಿಲ್ಲ.

ಆದ್ದರಿಂದ, ನೇರವಾಗಿ ಮುಖ್ಯೋಪಾಧ್ಯಾಯರನ್ನು ಅವ್ಯವಹಾರದಲ್ಲಿ ತೊಡಗಿದ್ದೀರಿ ಎಂದು ಆಪಾದಿಸುವುದು ಸರಿಯಾದ ಕ್ರಮ ಆಗಿರುವುದಿಲ್ಲ. ಹೀಗಿರುವಾಗ ಮುಖ್ಯೋಪಾಧ್ಯಾಯರು ಹೆಚ್ಚುವರಿ ಹಣವನ್ನು ಮರುಭರಣ ಮಾಡಬೇಕೆಂದು ಆದೇಶಿಸಿದ ಆಜ್ಞೆಗೆ ಕೂಡಲೇ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ತಡೆಯಾಜ್ಞೆ ನೀಡಬೇಕೆಂದು ಕೋರುತ್ತೇನೆ. ಇದಲ್ಲದೆ ಈ ಕುರಿತು ಸಂಬಂಧಪಟ್ಟವರಿಗೆ ಮರು ವಿಚಾರಣೆ ನಡೆಸಿ ನಿಜವಾದ ಅಪರಾದ ಮಾಡಿದವರ ಮೇಲೆ ಕ್ರಮ ಕೈಗೊಳ್ಳುವಂತೆ ಒತ್ತಾಯಿಸುವೆನು.

:ಉತ್ತರ:

ಉತ್ತರ ಕನ್ನಡ ಮತ್ತು ಶಿರಸಿ ಶೈಕ್ಷಣಿಕ ಜಿಲ್ಲೆಯ ಅಕ್ಷರ ದಾಸೋಹ ಕಾರ್ಯಕ್ರಮದಡಿ ಅಡುಗೆ ಸಿಬ್ಬಂದಿಗಳಿಗೆ ನೀಡಲಾಗಿರುವ ಏಪ್ರಾನ್ ಖರೀದಿಯಲ್ಲಿ ನಡೆದಿರುವ ಅವ್ಯವಹಾರದ ಬಗ್ಗೆ ಪರಿಶಿಲನೆ ನಡೆಸಿ, ಮಾರುಕಟ್ಟೆ ದರಕ್ಕಿಂತ ಹೆಚ್ಚಿನ ಹಣವನ್ನು ಪಾವತಿಸಿ ಸರ್ಕಾರದ ಬೊಕ್ಕಸಕ್ಕೆ ಆರ್ಥಿಕ ನಷ್ಟವನ್ನುಂಟು ಮಾಡಿರುವ ಮುಖ್ಯ ಶಿಕ್ಷಕರನ್ನು ಗುರುತಿಸಿ ಅವರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲು

ವಿಫಲರಾಗಿರುವ ಉಪ ನಿರ್ದೇಶಕರು / ಕ್ಷೇತ್ರ ಶಿಕ್ಷಣಾಧಿಕಾರಿ ವಿರುದ್ಧ ವಿಚಾರಣೆ ನಡೆಸಲು ದಿನಾಂಕ:22/05/2018ರಲ್ಲಿ ನಿವೃತ್ತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು. ಸದರಿ ಪ್ರಕರಣದಲ್ಲಿ ವಿಚಾರಣೆಯನ್ನು ನಡೆಸಿ, ವಿಚಾರಣಾಧಿಕಾರಿಗಳು ದಿನಾಂಕ:24/09/2018 ರಂದು ಸರ್ಕಾರಕ್ಕೆ ಸಲ್ಲಿಸಿರುವ ವಿಚಾರಣಾ ವರದಿಯಲ್ಲಿ ಅಕ್ಷರ ದಾಸೋಹ ಕಾರ್ಯಕ್ರಮದಡಿ ಅಡುಗೆ ಸಿಬ್ಬಂದಿಗಳಿಗೆ ನೀಡಲಾಗುವ ಏಪ್ರಾನ್ ಖರೀದಿಯಲ್ಲಿ ಉತ್ತರ ಕನ್ನಡ/ಶಿರಸಿ ಶೈಕ್ಷಣಿಕ ಜಿಲ್ಲೆಗಳ ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಪಾತ್ರ ಇರುವುದಿಲ್ಲವೆಂದು ವರದಿ ಸಲ್ಲಿಸಿರುತ್ತಾರೆ. ಹಾಗೆಯೇ ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್ ಅಧಿಕಾರಿಗಳು, ಮತ್ತು ಎಸ್.ಡಿ.ಎಂ.ಸಿ. ಅಧ್ಯಕ್ಷರು/ಸದಸ್ಯರುಗಳು ಜವಾಬ್ದಾರರಾಗಿರುತ್ತಾರೆ ಎಂದು ವಿಚಾರಣಾಧಿಕಾರಿಗಳು ವರದಿ ಮಾಡಿರುತ್ತಾರೆ.

ವಿಚಾರಣಾಧಿಕಾರಿಗಳ ವಿಚಾರಣಾ ವರದಿಯನ್ನು ಸರ್ಕಾರದ ಹಂತದಲ್ಲಿ ಪರಿಶೀಲಿಸಿ ಸದರಿ ಪ್ರಕರಣದಲ್ಲಿ ಉಪ ನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಪಾತ್ರ ಇರುವುದಿಲ್ಲದಿರುವುದನ್ನು ಪರಿಗಣಿಸಿ ಮೇಲ್ಕಂಡ ಪ್ರಕರಣದಲ್ಲಿ ಉಪನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ಸರ್ಕಾರದ ಆದೇಶ ಸಂಖ್ಯೆ:ಇಡಿ 44 ಡಿಜಿಪಿ 2017, ದಿ29/11/2019ರನ್ವಯ ದೋಷಮುಕ್ತಗೊಳಿಸಿ ಆದೇಶಿಸಲಾಗಿದೆ.

ಅಲ್ಲದೇ, ಸದರಿ ವಿಚಾರಣಾ ವರದಿಯ ಮೇಲೆ ದಿನಾಂಕ:09/11/2018ರಂದು ನಡೆದ ವಿಧಾನ ಸಭೆ ಭರವಸೆ ಸಮಿತಿ ಸಭೆಯಲ್ಲಿ ಚರ್ಚಿಸಲಾಗಿದ್ದು, ಸಮಿತಿಯ ನಿರ್ದೇಶನದಂತೆ ಹೆಚ್ಚುವರಿ ವೆಚ್ಚ ಮಾಡಿರುವ ಹಣವನ್ನು ಸಂಬಂಧಪಟ್ಟವರಿಂದ ಶೇ.15ರ ಬಡ್ಡಿ ದರದಲ್ಲಿ ಸರ್ಕಾರಕ್ಕೆ ಮರು ಭರಣ ಮಾಡಲು ಕ್ರಮಕೈಗೊಳ್ಳುವಂತೆ ಅಪರ ಆಯುಕ್ತರು, ಸಾ.ಶಿ.ಇ., ಧಾರವಾಡ ಇವರಿಗೆ ದಿನಾಂಕ:29/11/2018ರ ಅರೆ ಸರ್ಕಾರಿ ಪತ್ರದಲ್ಲಿ ತಿಳಿಸಲಾಗಿದೆ. ಈ ಪೈಕಿ ಶಿರಸಿ ಶೈಕ್ಷಣಿಕ ಜಿಲ್ಲೆಯಲ್ಲಿ ಮುಖ್ಯ ಶಿಕ್ಷಕರಿಂದ ವಸೂಲಿ ಮಾಡಲು ಕ್ರಮ ಕೈಗೊಳ್ಳುತ್ತಿರುತ್ತಾರೆ. ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಜಿಲ್ಲಾ ಘಟಕದ ಅಧ್ಯಕ್ಷರು ಏಪ್ರಾನ್ ಖರೀದಿಯಲ್ಲಿ ಮುಖ್ಯ ಶಿಕ್ಷಕರು ಯಾವುದೇ ತಪ್ಪು ಮಾಡಿರುವುದಿಲ್ಲವಾದ್ದರಿಂದ ಹೆಚ್ಚುವರಿಯಾಗಿ ಪಾವತಿಸುವ ಅಗತ್ಯವಿಲ್ಲವೆಂದು ಪತ್ರಿಕೆಯಲ್ಲಿ ಪ್ರಕಟಣೆ ನೀಡಿರುವುದರಿಂದ ಉತ್ತರ ಕನ್ನಡ ಜಿಲ್ಲೆಯಲ್ಲಿ 5 ತಾಲ್ಲೂಕುಗಳಲ್ಲಿ ಹೆಚ್ಚುವರಿಯಾಗಿ ಭರಿಸಿರುವ ಹಣವನ್ನು ಮುಖ್ಯ ಶಿಕ್ಷಕರು ಮರು ಪಾವತಿಸಲು ಒಪ್ಪಿರುವುದಿಲ್ಲ.

ಮುಂದುವರೆದು, ವಿಚಾರಣಾಧಿಕಾರಿಗಳು ನೀಡಿರುವ ವರದಿಯನ್ನಾಧರಿಸಿ ಉತ್ತರ ಕನ್ನಡ/ಶಿರಸಿ ಶೈಕ್ಷಣಿಕ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್ ಅಧಿಕಾರಿಗಳು ಮತ್ತು ಎಸ್.ಡಿ.ಎಂ.ಸಿ. ಅಧ್ಯಕ್ಷರು/ಸದಸ್ಯರುಗಳ ವಿವರಣೆಯನ್ನು ಪಡೆದು ಸದರಿಯವರುಗಳ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸುವಂತೆ ಅರೆ ಸರ್ಕಾರಿ ಪತ್ರ ದಿನಾಂಕ:03/11/2018ರಲ್ಲಿ ಮುಖ್ಯಕಾರ್ಯನಿರ್ವಾಹಣಾಧಿಕಾರಿ, ಜಿಲ್ಲಾ ಪಂಚಾಯತ್ ಉತ್ತರ ಕನ್ನಡ ಜಿಲ್ಲೆ ಇವರನ್ನು ಕೋರಲಾಗಿತ್ತು. ಅದರಂತೆ, ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು ದಿನಾಂಕ : 25.03.2019 ರಂದು ಸಂಬಂಧಪಟ್ಟ ಶಿಕ್ಷಣಾಧಿಕಾರಿ, ಅಕ್ಷರ ದಾಸೋಹ, ಜಿ.ಪಂ., ಕಾರವಾರ ಹಾಗೂ 11 ತಾಲ್ಲೂಕಿನಲ್ಲಿ ಸಹಾಯಕ ನಿರ್ದೇಶಕರು, ತಾ. ಪಂ, ಅಕ್ಷರ ದಾಸೋಹ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಿ ಸದರಿಯವರುಗಳಿಂದ ರಕ್ಷಣಾ ಹೇಳಿಕೆಯನ್ನು ಪಡೆದು ದಿನಾಂಕ:14/05/2019ರಂದು ಮುಂದಿನ ಕ್ರಮಕ್ಕಾಗಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ರಕ್ಷಣಾ ಹೇಳಿಕೆಯಲ್ಲಿನ ಮುಖ್ಯಾಂಶಗಳು ಈ ಕೆಳಕಂಡಂತಿರುತ್ತದೆ.

ಹಿಂದಿನ ಶಿಕ್ಷಣಾಧಿಕಾರಿ, ಅಕ್ಷರ ದಾಸೋಹ, ಕಾರವಾರ ಇವರು, ಜಿಲ್ಲಾ ಮಟ್ಟದ ಅಕ್ಷರ ದಾಸೋಹ ಅಧಿಕಾರಿಯಾಗಿದ್ದರೂ ಸಹ ಸ್ವತಂತ್ರವಾದ ಅಧಿಕಾರವನ್ನು ಹೊಂದಿರುವುದಿಲ್ಲವಾದ್ದರಿಂದ ಮೇಲಾಧಿಕಾರಿಗಳ ನಿರ್ದೇಶನದಂತೆ ಹಾಗೂ ಇಲಾಖೆಯ ನಿಯಮಾವಳಿಯ ಮಾರ್ಗಸೂಚಿಗನುಗುಣವಾಗಿ ಜವಾಬ್ದಾರಿಯುತವಾಗಿ ಅತ್ಯಂತ ಪ್ರಮಾಣಿಕವಾಗಿ ಮತ್ತು ದಕ್ಷತೆಯಿಂದ ಕಾರ್ಯನಿರ್ವಹಿಸುತ್ತಿರುವುದಾಗಿ

ತಿಳಿಸಿರುತ್ತಾರೆ ಹಾಗೂ 11 ತಾಲ್ಲೂಕಿನ ಹಿಂದಿನ ಸಹಾಯಕ ನಿರ್ದೇಶಕರು, ತಾಲ್ಲೂಕು ಪಂಚಾಯತ್, ಅಕ್ಷರ ದಾಸೋಹ ಇವರುಗಳು ತಮ್ಮ ಹೇಳಿಕೆಯಲ್ಲಿ, ಏಪ್ರಾನ್ ಖರೀದಿಗೆ ಸಂಬಂಧಿಸಿದಂತೆ, ಜಂಟಿ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು ಇವರ ದಿನಾಂಕ:01/07/2013ರ ಜ್ಞಾಪನದಲ್ಲಿ ಏಪ್ರಾನ್‌ಗಳ ಅಳತೆ ವಿನ್ಯಾಸಗಳ ಯಾವುದೇ ಮಾರ್ಗದರ್ಶನ ನೀಡದೆ ಇರುವ ಕಾರಣ ಶಾಲಾ ಹಂತದಲ್ಲಿ ಎಸ್.ಡಿ.ಎಂ.ಸಿ., ಮೂಲಕ ಏಪ್ರಾನ್‌ಗಳನ್ನು ಖರೀದಿಸಲಾಗಿದೆ. ಶಾಲೆಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಏಪ್ರಾನ್‌ಗಳನ್ನು ಪರಿಶೀಲಿಸಲಾಗಿ, ಉತ್ತಮವಾಗಿರುವುದು ಕಂಡು ಬರುತ್ತದೆ. ಆದರೆ, ತಾಂತ್ರಿಕವಾಗಿ ಪರಿಶೀಲಿಸಲು ನೈಪುಣ್ಯತೆ ಹೊಂದಿಲ್ಲದಿರುವುದಾಗಿ ಹಾಗೂ ಖರೀದಿ ಮೊತ್ತವು ರೂ.5,000/-ದೊಳಗೆ ಇರುವುದರಿಂದ ಖರೀದಿ ಪ್ರಕ್ರಿಯೆಗಳನ್ನು ನೇರವಾಗಿ ಶಾಲಾ ಹಂತದಲ್ಲಿ ಜರುಗಿಸಲಾಗಿದ್ದು, ಸದರಿ ಖರೀದಿಯಲ್ಲಿ ತಮ್ಮ ಪಾತ್ರ ಇರುವುದಿಲ್ಲವೆಂದು ಸಂಬಂಧಪಟ್ಟ ಅಧಿಕಾರಿಗಳು ವಿವರಣೆಯನ್ನು ನೀಡಿರುತ್ತಾರೆ.

ಶಿಕ್ಷಣಾಧಿಕಾರಿ, ಅಕ್ಷರ ದಾಸೋಹ, ಜಿ.ಪಂ., ಕಾರವಾರ ಹಾಗೂ 11 ತಾಲ್ಲೂಕಿನ ಸಹಾಯಕ ನಿರ್ದೇಶಕರು, ತಾ. ಪಂ, ಅಕ್ಷರ ದಾಸೋಹ ಇವರುಗಳು ಸಲ್ಲಿಸಿರುವ ರಕ್ಷಣಾ ಹೇಳಿಕೆಗಳನ್ನು ಲಭ್ಯ ದಾಖಲೆಗಳು, ಸಾಕ್ಷ್ಯಗಳ ಹಿನ್ನೆಲೆಯಲ್ಲಿ ಸರ್ಕಾರದ ಹಂತದಲ್ಲಿ ಪರಿಶೀಲಿಸಲಾಗುತ್ತಿದೆ.

ಮೇಲಿನಂತೆ ಈ ಬಗ್ಗೆ ನಡೆಸಲಾದ ವಿಚಾರಣೆಗಳಿಂದ ಶಾಲಾ ಹಂತದಲ್ಲಿಯೇ ಖರೀದಿ ಪ್ರಕ್ರಿಯೆ ನಡೆದಿರುವುದು ದೃಢಪಟ್ಟಿರುತ್ತದೆ. ಆದ್ದರಿಂದ ಹೆಚ್ಚುವರಿಯಾಗಿ ಪಾವತಿಯಾಗಿರುವ ಹಣವನ್ನು ಸಂಬಂಧಿಸಿದ ಶಾಲೆಗಳ ಮುಖ್ಯಶಿಕ್ಷಕರಿಂದಲೇ ವಸೂಲಿ ಮಾಡುವುದು ಅನಿವಾರ್ಯವಾಗಿದೆ.

ಉತ್ತರ ಕನ್ನಡ ಉತ್ತರ ಕನ್ನಡ ಜಿಲ್ಲಾ ಪಂಚಾಯತ್ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿಸಮಿತಿಯ ನಿರ್ಣಯ ಕೈಗೊಂಡು ಏಪ್ರಾನ್ ಖರೀದಿಯಲ್ಲಿ ಅವ್ಯವಹಾರ ನಡೆದಿದೆ ಎಂದು ಕಂಡು ಬಂದಲ್ಲಿ ಅಂತಹ ಶಾಲಾ ಮುಖ್ಯಶಿಕ್ಷಕರುಗಳಿಂದ ಸರ್ಕಾರಕ್ಕೆ ನಷ್ಟವಾದ ಹೆಚ್ಚುವರಿ ಹಣವನ್ನು ಶೇ.15% ರ ಬಡ್ಡಿದರದಲ್ಲಿ ವಸೂಲಿ ಮಾಡಲು ಕ್ಷೇತ್ರ ಶಿಕ್ಷಣಾಧಿಕಾರಿಗಳಿ ಸೂಚಿಸಿರುತ್ತಾರೆ. ಅದರಂತೆ ಏಪ್ರಾನ್ ಖರೀದಿಗಾಗಿ ಹೆಚ್ಚುವರಿ ವೆಚ್ಚ ಮಾಡಿರುವ ಹಣವನ್ನು ಶೇ.15% ರ ಬಡ್ಡಿದರದಲ್ಲಿ ವಸೂಲಿ ಮಾಡಲು ಕ್ರಮವಹಿಸಲಾಗುತ್ತಿದೆ.

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಸಂಖ್ಯೆ:ಇಪಿ 20 ಡಿಎಆರ್ 2020